ಕರ್ನಾಟಕ ಸರ್ಕಾರ

# ಸಮಾಜ ಕಲ್ಯಾಣ / ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ
# ಪರೀಕ್ಷಾ ಪೂರ್ವ ತರಬೇತಿ ಕೇಂದ್ರ

ಸಂ: ಪಪೂತಕೇ/ಎಸ್-4/ಸಿಆರ್-4-ಸಸೇ/2023-24

ಅಪರ ನಿರ್ದೇಶಕರು,
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಡಾ.ಬಿ.ಆರ್.ಅಂಬೇಡ್ಕರ್ ಭವನ,
ಬೆಂಗಳೂರು ದಿನಾಂಕ: 01.12.2023

## ಅಧಿಸೂಚನೆ

ವಿಷಯ:- 2023-24 ನೇ ಸಾಲಿಗೆ ಭಾರತೀಯ ಸೇನೆ / ಭದ್ರತಾ ಪಡೆ / ಪೊಲೀಸ್ ಸೇವೆ ಸೇರಿದಂತೆ ಇತರೆ ಸಮವಸ್ತ್ರ ಸೇವೆಗಳಿಗೆ ಸೇರ ಬಯಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ತರಬೇತಿ ನೀಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

2023-24 ನೇ ಸಾಲಿಗೆ ಭಾರತೀಯ ಸೇನೆ / ಭದ್ರತಾ ಪಡೆ / ರಾಜ್ಯ ಪೊಲೀಸ್ ಸೇವೆ ಹಾಗೂ ಇತರೆ ಸರ್ಕಾರಿ ಸಮವಸ್ತ್ರ (Uniformed Services) ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ಉಚಿತವಾಗಿ 2 ತಿಂಗಳು ವಸತಿಯುತ ದೈಹಿಕ ಸಾಮರ್ಥ್ಯ ತರಬೇತಿ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ನೀಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿವೆ.

| **ಸಮವಸ್ತ್ರ (Uniformed Services) ಸೇವೆಗಳಿಗೆ ವಸತಿಯುತ 60 ದಿನಗಳ ದೈಹಿಕ ಹಾಗೂ ಇತರೆ ತರಬೇತಿ** | | |
|---|---|---|
| 1 | ವಿದ್ಯಾರ್ಹತೆ | 10ನೇ ತರಗತಿ ಉತ್ತೀರ್ಣರಾಗಿರಬೇಕು. |
| 2 | ವಯೋಮಿತಿ | 17 ವರ್ಷ 6 ತಿಂಗಳಿನಿಂದ 23 ವರ್ಷಗಳು |

<table>
<tr><td>3</td><td>ಅಭ್ಯರ್ಥಿಯ ಸಾಮಾನ್ಯ ಅರ್ಹತೆ</td><td colspan="3">1. ಕರ್ನಾಟಕ ರಾಜ್ಯದ ನಿವಾಸಿಯಾಗಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿರಬೇಕು.<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು.</td></tr>
<tr><td>4</td><td>ವಾರ್ಷಿಕ ಆದಾಯ</td><td colspan="3">ಕುಟುಂಬದ ವಾರ್ಷಿಕ ಆದಾಯ ರೂ.5.00 ಲಕ್ಷ ಮೀರಿರಬಾರದು.</td></tr>
<tr><td rowspan="4">5</td><td rowspan="4">ದೈಹಿಕ ಗುಣಮಟ್ಟ ಪರೀಕ್ಷೆ</td><td>ವಿವರಗಳು</td><td>ಪುರುಷ ಅಭ್ಯರ್ಥಿ</td><td>ಮಹಿಳಾ ಅಭ್ಯರ್ಥಿ</td></tr>
<tr><td>ಎತ್ತರ</td><td>162 - 185 ಸೆಂ. ಮೀ</td><td>152 ಸೆಂ. ಮೀ</td></tr>
<tr><td>ಎದೆ ಸುತ್ತಳತೆ</td><td>ಸಹಜ ಸ್ಥಿತಿಯಲ್ಲಿ 75 ಸೆಂ.ಮೀ. ಹೊಂದಿದ್ದು, ವಿಸ್ತರಿಸಿದಾಗ ಕನಿಷ್ಠ 80 ಸೆ.ಮೀ. ಹೊಂದಿರಬೇಕು</td><td>ಅನ್ವಯಿಸುವುದಿಲ್ಲ</td></tr>
<tr><td>ತೂಕ</td><td>ಕನಿಷ್ಠ 47.2 ರಿಂದ ಗರಿಷ್ಠ 78.7 ಕೆ.ಜಿ. ಯೊಳಗಿರಬೇಕು</td><td>ಕನಿಷ್ಠ 44.4 ಕೆ.ಜಿ.</td></tr>
<tr><td>6</td><td>ಅರ್ಜಿ ಸಲ್ಲಿಸುವ ವಿಧಾನ</td><td colspan="3">1. ಹೆಚ್ಚಿನ ಮಾಹಿತಿಗಾಗಿ ಮತ್ತು ಆನ್-ಲೈನ್ ಅರ್ಜಿಯನ್ನು ಸಲ್ಲಿಸಲು www.sw.kar.nic.in ವೆಬ್ ಸೈಟ್ ನ್ನು ವೀಕ್ಷಿಸುವುದು.<br>2. ತಾಂತ್ರಿಕವಾಗಿ ಸಮಸ್ಯೆಗಳು ಕಂಡು ಬಂದರೆ ದೂರವಾಣಿ ಸಂಖ್ಯೆ : 9482300400 / 9480843005 / 080-22207784 ನ್ನು ಸಂಪರ್ಕಿಸುವುದು.</td></tr>
<tr><td>7</td><td>ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:</td><td colspan="3">10.12.2023 ರ ಸಂಜೆ 6.00 ಗಂಟೆವರೆಗೆ</td></tr>
<tr><td>8</td><td>ಅಭ್ಯರ್ಥಿಗಳ ಆಯ್ಕೆ</td><td colspan="3">1. 250 ಅಭ್ಯರ್ಥಿಗಳಂತೆ 4 ಬ್ಯಾಚ್ ಗಳಲ್ಲಿ ತರಬೇತಿ ಸಂಸ್ಥೆ ಮೂಲಕ ಆಯ್ಕೆ ಮಾಡಲಾಗುವುದು.<br>2. ತರಬೇತಿ ನೀಡಲು ನಿಗಧಿಪಡಿಸಿದ ತರಬೇತಿ ಸಂಸ್ಥೆಯ ನೇತೃತ್ವದಲ್ಲಿ ನಡೆಸಲಾಗುವ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಷರತ್ತಿಗೊಳಪಟ್ಟು ಅಭ್ಯರ್ಥಿಗಳ ಆಯ್ಕೆ ನಡೆಸಲಾಗುವುದು. ಅಭ್ಯರ್ಥಿಗಳ ಅಂತಿಮ ಆಯ್ಕೆ ತರಬೇತಿ ನೀಡುವ ಸಂಸ್ಥೆಯದ್ದಾಗಿರುತ್ತದೆ.<br>3. ಮೊದಲು ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳಿಗೆ ಆದ್ಯತೆ ಮೇರೆಗೆ ಹಂತ ಹಂತವಾಗಿ ತರಬೇತಿಗೆ ನಿಯೋಜಿಸಲಾಗುವುದು.</td></tr>
</table>

| | | |
|---|---|---|
| 9 | ಇತರೆ ಷರತ್ತುಗಳು | 1. ನಿಗಧಿತ ದಿನಾಂಕ ಹಾಗೂ ಸ್ಥಳಕ್ಕೆ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.<br>2. ಅಭ್ಯರ್ಥಿಗಳಿಗೆ ದೈಹಿಕ ಸಾಮರ್ಥ್ಯ ಪರೀಕ್ಷೆ ಸಂದರ್ಭದಲ್ಲಿ ಉಂಟಾಗಬಹುದಾದ ಯಾವುದೇ ನಷ್ಟ, ದುರಂತ, ದುರ್ಘಟನೆಗೆ ಇಲಾಖೆ ಅಥವಾ ತರಬೇತಿ ನೀಡಲು ಆಯ್ಕೆಯಾದ ತರಬೇತಿ ಸಂಸ್ಥೆ ಹೊಣೆಯಾಗುವುದಿಲ್ಲ. |

**ತರಬೇತಿ ಸೌಲಭ್ಯ:-**

ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಉಚಿತ ಊಟ, ವಸತಿಯೊಂದಿಗೆ 2 ತಿಂಗಳ ಸಮವಸ್ತ್ರ ಸೇವೆಗೆ ದೈಹಿಕ ಸಾಮರ್ಥ್ಯ ತರಬೇತಿ ಹಾಗೂ ಇತರೆ ಅಗತ್ಯವಾಗಿರುವ ತರಬೇತಿಗಳನ್ನು ನೀಡಲಾಗುತ್ತದೆ. ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ತರಬೇತಿ ಸಂಸ್ಥೆ ಮೂಲಕ ಪ್ರತ್ಯೇಕ ವಸತಿ ಸೌಲಭ್ಯ ಕಲ್ಪಿಸಲಾಗುವುದು.

**ಗಮನದಲ್ಲಿಡಬೇಕಾದ ಅಂಶಗಳು:-**

- ಇಲಾಖಾವತಿಯಿಂದ ಯಾವುದೇ ವೈಯಕ್ತಿಕ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲ ಆದ್ದರಿಂದ, ಇಲಾಖಾ ವೆಬ್‌ಸೈಟ್‌ನಲ್ಲಿ **www.sw.kar.nic.in** ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
- ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಪರಿಣಾಮಗಳಿಗೆ ಇಲಾಖೆ ಜವಾಬ್ದಾರಿಯಾಗಿರುವುದಿಲ್ಲ.
- ನಿಗಧಿತ ದಿನಾಂಕ ಹಾಗೂ ಸಮಯಕ್ಕೆ ದೈಹಿಕ ಪರೀಕ್ಷೆಗೆ ಹಾಜರಾಗದಿದ್ದರೆ, ಆಯ್ಕೆಗೆ ಪರಿಗಣಿಸುವುದಿಲ್ಲ. ಇಂತಹ ನಿರ್ಲಕ್ಷಕ್ಕೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ.

ಅಪರ ನಿರ್ದೇಶಕರು,
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಬೆಂಗಳೂರು.